144ನೇ ಅಧಿವೇಶನದಲ್ಲಿ ದಿ:13/9/21 ರಂದು ಸದನದಲ್ಲಿ
ನಿ-330 ಚರ್ಚೆಯಾಗಿದೆ.
ಕ್ರ-01

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಟಿ.ಶ್ರೀ ಕಂಠೇಗೌಡ ಇವರು ನಿಯಮ 330ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ ನೀಡುವ ಬಗ್ಗೆ.**

**ವಿಷಯ:** ಕರ್ನಾಟಕ ರಾಜ್ಯದ ಪೂರ್ವದಲ್ಲಿ ಸ್ಥಾಪನೆಯಾದಂತಹ ಏಕೈಕ ಸರ್ಕಾರಿ ಸ್ವಾಮ್ಯದ ಮಂಡ್ಯ ಮೈಶುಗರ್ ಸಕ್ಕರೆ ಕಾರ್ಖಾನೆಯು ಕಳೆದ ಕೆಲವು ವರ್ಷಗಳಿಂದ ಕಬ್ಬನ್ನು ಅರೆಯದೆ ಕಾರ್ಖಾನೆಯು ಸ್ಥಗಿತವಾಗಿದ್ದು, ಇದರಿಂದ ಈ ಭಾಗದ ಕಬ್ಬು ಬೆಳೆದ ರೈತರನ್ನು ಸಂಕಷ್ಟಕ್ಕೆ ಸಿಲುಕಿಸಿದೆ. ಅಲ್ಲದೆ ಸರ್ಕಾರ ಇತ್ತೀಚೆಗೆ ಈ ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡಲು ಹೊರಟಿದೆ. ಸದರಿ ಕಾರ್ಖಾನೆಯನ್ನು ಸರ್ಕಾರಿ ಸ್ವಾಮ್ಯದಲ್ಲೇ ಉಳಿಸಿಕೊಂಡು ಆರಂಭಿಸಬೇಕೆಂಬ ವಿಷಯ ಸದನದಲ್ಲಿ ಪ್ರಸ್ತಾಪಬಯಸುತ್ತೇನೆ.

**ಸರ್ಕಾರದ ಉತ್ತರ:**

ಮಂಡ್ಯದ ಮೈಸೂರು ಸಕ್ಕರೆ ಕಾರ್ಖಾನೆಯನ್ನು 1933ರಲ್ಲಿ ಸ್ಥಾಪಿಸಲಾಗಿದ್ದು, ಪ್ರಸ್ತುತ 5000 ಟಿ.ಸಿ.ಡಿ ಕಬ್ಬು ನುರಿಸುವ ಸಾಮರ್ಥ್ಯವನ್ನು, 30 ಮೆಗಾ ವ್ಯಾಟ್ ಕೋಜನ್ ವಿದ್ಯುತ್ ಘಟಕ ಹಾಗೂ 36 ಕೆ.ಎಲ್.ಪಿ.ಡಿ ಸಾಮರ್ಥ್ಯದ ಡಿಸ್ಟಿಲರಿ ಹೊಂದಿರುತ್ತದೆ ಹಾಗೂ ಈ ಕಾರ್ಖಾನೆಯ ಕಬ್ಬು ಮೀಸಲು ಕೇತ್ರದಲ್ಲಿ ಅಂದಾಜು 7 ರಿಂದ 8 ಲಕ್ಷ ಟನ್ ಕಬ್ಬು ಲಭ್ಯವಾಗುತ್ತದೆ.

ಭಾರತ ಸರ್ಕಾರದ ಹಣಕಾಸು ಮಂತ್ರಾಲಯದ ಅಧೀನದ ಬೋರ್ಡ್ ಆಫ್ ಇಂಡಸ್ಟ್ರೀಯಲ್ ಅಂಡ್ ಫೈನಾನ್ಸಿಯಲ್ ರಿಕನ್‌ಸ್ಟ್ರಕ್ಷನ್ (ಬಿ.ಐ.ಎಫ್.ಆರ್) ನಿಂದ 2005ರಲ್ಲಿ ಮೈಸೂರು ಸಕ್ಕರೆ ಕಂಪನಿಯು ರೋಗಗ್ರಸ್ಥ ಕಾರ್ಖಾನೆಯೆಂದು ಘೋಷಿಸಲ್ಪಟ್ಟಿರುತ್ತದೆ.

ಮೈಸೂರು ಸಕ್ಕರೆ ಕಂಪನಿಯು ಸಾರ್ವಜನಿಕ ವಲಯದಲ್ಲಿರುವುದರಿಂದ 1998-99 ರಿಂದ 2019-20ನೇ ಸಾಲಿನವರೆಗೆ ಒಟ್ಟು 522.00 ಕೋಟಿಗಳಷ್ಟು ಹಣಕಾಸಿನ ನೆರವನ್ನು ರಾಜ್ಯ ಸರ್ಕಾರದಿಂದ ಅನುದಾನ / ಸಾಲದ ರೂಪದಲ್ಲಿ ಒದಗಿಸಲಾಗಿದೆ. ಮೈಸೂರು ಸಕ್ಕರೆ ಕಂಪನಿಯು ಪ್ರಸ್ತುತ ರೂ.136.01 ಕೋಟಿಗಳಷ್ಟು ಸಾಲ ಮತ್ತು ಜವಾಬ್ದಾರಿಗಳನ್ನು ಹೊಂದಿದ್ದು, 2013-14 ರ ಅಂತ್ಯಕ್ಕೆ ಕ್ರೋಢೀಕೃತ ನಷ್ಟ ರೂ.463.39 ಕೋಟಿಗಳಷ್ಟಿರುತ್ತದೆ.

ಕಾರ್ಖಾನೆಯು ಆರ್ಥಿಕ ನಷ್ಟವನ್ನು ಅನುಭವಿಸುತ್ತಾ ಬಂದಿದ್ದು, ದುಡಿಯುವ ಬಂಡವಾಳದ ಕೊರತೆಯಿಂದಾಗಿ ಕಬ್ಬು ಮೀಸಲು ಕ್ಷೇತ್ರದಲ್ಲಿ ಬೆಳೆದ 7 ರಿಂದ 8 ಲಕ್ಷ ಮೆ.ಟನ್ ಕಬ್ಬನ್ನು ಪೂರ್ಣ ಪ್ರಮಾಣದಲ್ಲಿ ನುರಿಸಲು ಸಾಧ್ಯವಾಗಿರುವುದಿಲ್ಲ. ಇದರಿಂದಾಗಿ ಮೈಸೂರು ಸಕ್ಕರೆ ಕಂಪನಿಯು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, 2015-16, 2016-17ರ ಹಂಗಾಮುಗಳಲ್ಲಿ ಮತ್ತು 2019-20 ನೇ ಹಂಗಾಮಿನಿಂದ ಕಬ್ಬು ನುರಿಸುವ ಕಾರ್ಯವನ್ನು ಸ್ಥಗಿತಗೊಳಿಸಿರುತ್ತದೆ. ಆದ್ದರಿಂದ, ಈ ಕಾರ್ಖಾನೆಯ ವ್ಯಾಪ್ತಿಯಲ್ಲಿ ಬೆಳೆದ ಕಬ್ಬನ್ನು ನೆರೆಯ ಸಕ್ಕರೆ ಕಾರ್ಖಾನೆಗಳಿಗೆ ಹಂಚಿಕೆ ಮಾಡುವುದರ ಮೂಲಕ ರೈತರಿಗೆ ತೊಂದರೆಯಾಗದಂತೆ ಸರ್ಕಾರವು ಕ್ರಮ ವಹಿಸಿರುತ್ತದೆ. ಇದಲ್ಲದೇ, ಕಾರ್ಖಾನೆಯ ಕಾರ್ಮಿಕರಿಗೆ ಸಕಾಲದಲ್ಲಿ ವೇತನ ಮತ್ತು ಭತ್ಯೆಗಳನ್ನು ಪಾವತಿಸಲು ಸಾಧ್ಯವಾಗಿರುವುದಿಲ್ಲ.

ಈ ಹಿನ್ನೆಲೆಯಲ್ಲಿ ಮೈಸೂರು ಸಕ್ಕರೆ ಕಾರ್ಖಾನೆಯನ್ನು ಓ ಅಂಡ್ ಎಂ ಆಧಾರದ ಮೇಲೆ ಅಥವಾ ಎಲ್.ಆರ್.ಓ.ಟಿ ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡಿ ಪುನಶ್ಚೇತನಗೊಳಿಸಲು ದಿನಾಂಕ: 31.12.2019ರಂದು ಅಂದಿನ ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಹಾಗೂ ಸಕ್ಕರೆ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಿದ್ದು; ಅದರಂತೆ ವ್ಯವಸ್ಥಾಪಕ ನಿರ್ದೇಶಕರು, ಮೈಸೂರು ಸಕ್ಕರೆ ಕಂಪನಿ ಮಂಡ್ಯ ಇವರು ದಿನಾಂಕ: 09.01.2020 ರಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

..........2

ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನಶ್ಚೇತನಗೊಳಿಸಿ ಕಬ್ಬು ಮೀಸಲು ಕ್ಷೇತ್ರದಲ್ಲಿ ಬೆಳೆದ ಕಬ್ಬನ್ನು ಪೂರ್ಣ ಪ್ರಮಾಣದಲ್ಲಿ ನುರಿಸಿ ರೈತರ ಮತ್ತು ಕಾರ್ಮಿಕರ ಹಿತಾಸಕ್ತಿಯನ್ನು ಕಾಪಾಡುವ ಅವಶ್ಯಕವಿರುವುದರಿಂದ ಈ ಕಾರ್ಖಾನೆಯನ್ನು 2020-21ನೇ ಹಂಗಾಮಿನಿಂದ 40 ವರ್ಷಗಳ ಅವಧಿಗೆ LROT (Lease Rehabilitate Operate Transfer) ಆಧಾರದ ಮೇಲೆ ಇದ್ದಲ್ಲಿ ಇದ್ದಂತೆಯೇ ಖಾಸಗಿಯವರಿಗೆ ಗುತ್ತಿಗೆ ನೀಡಲು ಸರ್ಕಾರದ ಆದೇಶ ಸಂಖ್ಯೆ: ವಾಕೈ 05 ಸಿಓಎಫ್ 2020 ದಿನಾಂಕ: 09.03.2020 ರಲ್ಲಿ ಸರ್ಕಾರದ ಅನುಮತಿ ನೀಡಲಾಗಿದೆ ಮತ್ತು ಈ ಆದೇಶಕ್ಕೆ ದಿನಾಂಕ: 27.03.2020ರ ಸಚಿವ ಸಂಪುಟ ಸಭೆಯಲ್ಲಿ ಘಟನೋತ್ತರ ಅನುಮೋದನೆ ಪಡೆಯಲಾಗಿರುತ್ತದೆ.

ಮೈಸೂರು ಸಕ್ಕರೆ ಕಾರ್ಖಾನೆಯನ್ನು ಎಲ್.ಆರ್.ಓ.ಟಿ. ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡುವ ತೀರ್ಮಾನವನ್ನು ಕಾರ್ಖಾನೆ ವ್ಯಾಪ್ತಿಯ ಕಬ್ಬು ಬೆಳೆಗಾರ ರೈತರು, ಜನ ಪ್ರತಿನಿಧಿಗಳು ಮತ್ತು ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿ, ಕಾರ್ಖಾನೆಯನ್ನು ಓ ಅಂಡ್ ಎಂ ಆಧಾರದ ಮೇಲೆ ನಡೆಸುವಂತೆ ಮನವಿಗಳನ್ನು ಸಲ್ಲಿಸಿದ್ದರು. ಆದ್ದರಿಂದ, ಈ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಕುರಿತು ಸೂಕ್ತ ತೀರ್ಮಾನ ಕೈಗೊಳ್ಳಲು ವ್ಯವಸ್ಥಾಪಕ ನಿರ್ದೇಶಕರು, ಮೈಸೂರು ಸಕ್ಕರೆ ಕಂಪನಿ ಇವರು ದಿನಾಂಕ: 19.05.2020 ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೈಸೂರು ಸಕ್ಕರೆ ಕಂಪನಿ ನಿಯಮಿತ, ಮಂಡ್ಯ ಜಿಲ್ಲೆ ಈ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸುವ ಸಂಬಂಧ ಪ್ರಸ್ತಾವನೆಯನ್ನು ದಿನಾಂಕ: 25.06.2020 ರಂದು ಸಚಿವ ಸಂಪುಟ ಸಭೆಯ ತೀರ್ಮಾನಕ್ಕೆ ಪುನಃ ಮಂಡಿಸಲಾಗಿತ್ತು. ಸದರಿ ಪ್ರಸ್ತಾವನೆಯ ಕುರಿತು ಪರಾಮರ್ಶಿಸಿ, ಸಚಿವ ಸಂಪುಟಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸಚಿವ ಸಂಪುಟ ಒಂದು ಉಪ ಸಮಿತಿಯನ್ನು ರಚಿಸಲು ದಿನಾಂಕ: 25.06.2020 ರಂದು ನಡೆದ ಸಚಿವ ಸಂಪುಟ ಸಭೆಯ ಪ್ರಕರಣ ಸಂಖ್ಯೆ:ಸಿ.303/2020ರಲ್ಲಿ ನಿರ್ಣಯಿಸಿದ್ದು, ಅದರಂತೆ ಅಂದಿನ ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಇವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಲಾಗಿತ್ತು.

ಮೈಸೂರು ಸಕ್ಕರೆ ಕಾರ್ಖಾನೆಯ ವಸ್ತುಸ್ಥಿತಿ ಆಧರಿಸಿ ತಾಂತ್ರಿಕ ವರದಿಯನ್ನು ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಿಂದ ರಚಿಸಲಾಗುವ ತಾಂತ್ರಿಕ ಸಮಿತಿಯ ಮೂಲಕ ಸಲ್ಲಿಸಲು ಹಾಗೂ ಓ& ಎಂ ಆಧಾರದ ಮೇಲೆ ಕಾರ್ಖಾನೆಯನ್ನು ಪಡೆಯುವ ಗುತ್ತಿಗೆದಾರರು ಕಾರ್ಖಾನೆಯ ಎಲ್ಲಾ ವೆಚ್ಚಗಳನ್ನು ಭರಿಸಿ ಗರಿಷ್ಠ ಪ್ರಮಾಣದ ಸಾಮರ್ಥ್ಯಕ್ಕೆ ಅನುಗುಣವಾಗಿ ಉತ್ಪಾದನೆಯನ್ನು ಕೈಗೊಂಡು ಕಾರ್ಖಾನೆಗೆ ನೀಡಬೇಕಾದ ವಾರ್ಷಿಕ ಓ&ಎಂ ಮೊತ್ತವನ್ನು ನೀಡಲು ದಿನಾಂಕ:08.07.2020 ರಂದು ಜರುಗಿದ ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಗಿತ್ತು.

ಮೈಸೂರು ಸಕ್ಕರೆ ಕಾರ್ಖಾನೆಯನ್ನು ಓ ಅಂಡ್ ಎಂ ಅಥವಾ ಎಲ್.ಆರ್.ಓ.ಟಿ ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡುವುದರ ಮೂಲಕ ಪುನಶ್ಚೇತನಗೊಳಿಸುವುದರ ಸಾಧಕ ಬಾಧಕಗಳ ಬಗ್ಗೆ, ಮೆ: ಮಿಟ್ಕಾನ್ ಕನ್ಸಲ್ಟೆನ್ಸಿ ಅಂಡ್ ಇಂಜಿನಿಯರಿಂಗ್ ಸರ್ವೀಸಸ್ ಲಿಮಿಟೆಡ್, ಪುಣೆ ಇವರಿಂದ **"Techno Economic Feasibility Reoprt"** ಅನ್ನು ಮತ್ತು ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ ಇವರಿಂದ ತಾಂತ್ರಿಕ ವರದಿಯನ್ನು ಪಡೆಯಲಾಗಿತ್ತು. ಸದರಿ ವರದಿಗಳಲ್ಲಿನ ಅಭಿಪ್ರಾಯ/ಶಿಫಾರಸ್ಸುಗಳ ಹಿನ್ನಲೆಯಲ್ಲಿ ,ಮೈಸೂರು ಸಕ್ಕರೆ ಕಂಪನಿ ನಿಯಮಿತ,ಮಂಡ್ಯ ಜಿಲ್ಲೆ ಈ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಕುರಿತು ಪ್ರಸ್ತಾವನೆಯನ್ನು ಸಚಿವ ಸಂಪುಟದ ಮುಂದೆ ಮಂಡಿಸಲು ಸಚಿವ ಸಂಪುಟದ ಉಪ ಸಮಿತಿಗೆ ಸಲ್ಲಿಸಲಾಗಿತ್ತು.

.......3

ಮೈಸೂರು ಸಕ್ಕರೆ ಕಾರ್ಖಾನೆಯ ಕಬ್ಬು ಮೀಸಲು ಕ್ಷೇತ್ರದ ವ್ಯಾಪ್ತಿಯಲ್ಲಿನ ಕಬ್ಬು ಬೆಳೆಗಾರ ರೈತರ, ಕಂಪನಿಯ ಷೇರುದಾರರ ಮತ್ತು ಕಾರ್ಖಾನೆಯ ಕಾರ್ಮಿಕರ ಹಿತದೃಷ್ಟಿಯಿಂದ ಹಾಗೂ ಕಾರ್ಖಾನೆಯ ಸಾಲ ಮತ್ತು ಜವಾಬ್ದಾರಿಯನ್ನು ಸಮರ್ಪಕವಾಗಿ ನಿಭಾಯಿಸುವುದಕ್ಕಾಗಿ ಸದರಿ ಕಾರ್ಖಾನೆಯ ವ್ಯಾಪ್ತಿಯಲ್ಲಿ ಲಭ್ಯವಾಗುವ ಅಂದಾಜು 8.21 ಲಕ್ಷ. ಮೆ.ಟನ್ ಕಬ್ಬನ್ನು ಪೂರ್ಣ ಪ್ರಮಾಣದಲ್ಲಿ ನುರಿಸಲು ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸುವುದು ಮತ್ತು ಕಾರ್ಖಾನೆಯನ್ನು ಲಾಭದಾಯಕವಾಗಿ ನಡೆಸುವುದು ಅವಶ್ಯಕವಿರುವುದರಿಂದ ಮೈಸೂರು ಸಕ್ಕರೆ ಕಂಪನಿ ನಿಯಮಿತ, ಮಂಡ್ಯ ಜಿಲ್ಲೆ ಈ ಕಾರ್ಖಾನೆಯನ್ನು LROT(Lease Rehabilitate Operate Transfer) ಆಧಾರದ ಮೇಲೆ 2021-22ನೇ ಹಂಗಾಮಿನಿಂದ 40 ವರ್ಷಗಳ ಅವಧಿಗೆ ಖಾಸಗಿಯವರಿಗೆ ಗುತ್ತಿಗೆ ನೀಡಲು ದಿನಾಂಕ: 12.11.2020ರಂದು ಜರುಗಿದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಿದ್ದು, ಅದರಂತೆ ಸರ್ಕಾರದ ಆದೇಶ ಸಂಖ್ಯೆ: ಸಿಐ 05 ಸಿಓಎಫ್ 2020, ದಿ:18.11.2020 ರಲ್ಲಿ ಮೈಸೂರು ಸಕ್ಕರೆ ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡಲು ಸರ್ಕಾರದ ಅನುಮತಿ ನೀಡಲಾಗಿದೆ.

ಮೈಸೂರು ಸಕ್ಕರೆ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿರುವ 285 ಖಾಯಂ ನೌಕರರ ಪೈಕಿ 208 ನೌಕರರಿಗೆ ಸ್ವಯಂ ನಿವೃತ್ತಿ ಸೌಲಭ್ಯವನ್ನು ಮಂಜೂರು ಮಾಡುವುದಕ್ಕಾಗಿ 2020-21ನೇ ಆರ್ಥಿಕ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ: ಮೈಸೂರು ಸಕ್ಕರೆ ಕಾರ್ಖಾನೆಗೆ ಸಾಲಗಳು - 6860-04-190-2-01ರಲ್ಲಿ ಹಂಚಿಕೆ ಮಾಡಿರುವ ರೂ.21.80 ಕೋಟಿಗಳ ಅನುದಾನವನ್ನು ಸರ್ಕಾರದ ಆದೇಶ ಸಂಖ್ಯೆ: ಸಿಐ 05 ಸಿಓಎಫ್ 2020 ದಿನಾಂಕ:15.06.2020 ರಲ್ಲಿ ಬಿಡುಗಡೆಗೊಳಿಸಲಾಗಿತ್ತು. ಅದರಂತೆ ಸ್ವಯಂ ನಿವೃತ್ತಿಗೆ ಸಹಮತ ವ್ಯಕ್ತಪಡಿಸಿದ 222 ನೌಕರರಿಗೆ ಸ್ವಯಂ ನಿವೃತ್ತಿಯನ್ನು ನೀಡಲಾಗಿದ್ದು, ಇದರಲ್ಲಿ 63 ನೌಕರರಿಗೆ ನಿವೃತ್ತಿ ಸೌಲಭ್ಯಗಳನ್ನು ಬಿಡುಗಡೆಗೊಳಿಸುವುದು ಬಾಕಿ ಇರುತ್ತದೆ.

ಪ್ರಸ್ತುತ ಕಂಪನಿಯ ಸೇವೆಯಲ್ಲಿ 39 ಖಾಯಂ ನೌಕರರು ಉಳಿದಿದ್ದು, ಈ ಕಾರ್ಖಾನೆಯನ್ನು ಖಾಸಗಿಯವರಿಗೆ LROT (Lease Rehabilitate Operate Transfer) ಆಧಾರದ ಮೇರೆಗೆ 40 ವರ್ಷಗಳ ಅವಧಿಗೆ ಗುತ್ತಿಗೆ ನೀಡುತ್ತಿರುವುದರಿಂದ ಸದರಿ ನೌಕರರ ಸೇವೆ ಕಂಪನಿಗೆ ಅವಶ್ಯಕವಿಲ್ಲದಿರುವುದರಿಂದ ಹಾಗೂ ಮೈಸೂರು ಸಕ್ಕರೆ ಕಂಪನಿ ಆರ್ಥಿಕ ಮುಗ್ಗಟ್ಟನ್ನು ಎದುರಿಸುತ್ತಿದ್ದು, ಯಾವುದೇ ಸಂಪನ್ಮೂಲದ ಲಭ್ಯತೆ ಇಲ್ಲದಿರುವುದರಿಂದ ಕಂಪನಿಯ ಸಾಲ ಮತ್ತು ಜವಾಬ್ದಾರಿಗಳನ್ನು ತೀರುವಳಿ ಮಾಡಲು ರೂ.75.82 ಕೋಟಿಗಳನ್ನು ಸರ್ಕಾರದಿಂದ ಬಿಡುಗಡೆಗೊಳಿಸುವಂತೆ ವ್ಯವಸ್ಥಾಪಕ ನಿರ್ದೇಶಕರು ಮೈಸೂರು ಸಕ್ಕರೆ ಕಂಪನಿ ಇವರು ದಿನಾಂಕ: 16.01.2021 ಮತ್ತು 20.02.2021ರ ಪತ್ರಗಳಲ್ಲಿ ಕೋರಿದ್ದರು. ಸದರಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿತ್ತು.

ಆದರೆ, ಸ್ವಯಂ ನಿವೃತ್ತಿ ಯೋಜನೆಗೆ ಭವಿಷ್ಯದಲ್ಲಿ ಅಗತ್ಯವಾದ ಮೊತ್ತವನ್ನು ಕಂಪನಿಯೇ ಭರಿಸತಕ್ಕದೆಂದು ಈಗಾಗಲೇ ಸ್ಪಷ್ಟಪಡಿಸಿರುವುದರಿಂದ ಹಾಗೂ ಮೈಸೂರು ಸಕ್ಕರೆ ಕಾರ್ಖಾನೆಯನ್ನು LROT ಆಧಾರದ ಮೇಲೆ ಗುತ್ತಿಗೆ ನೀಡಲು ಸರ್ಕಾರವು ಮಂಜೂರಾತಿ ನೀಡಿದ್ದು, ಇದರಿಂದ ಕಂಪನಿಯು ಸಂಪನ್ಮೂಲ ಕ್ರೋಢೀಕರಿಸುವ ನಿರೀಕ್ಷೆ ಇರುವುದಾಗಿ ತಿಳಿಸಿ, ಹೆಚ್ಚುವರಿಯಾಗಿ ಅನುದಾನವನ್ನು ಮಂಜೂರು ಮಾಡಲು ಕೋರಿರುವ ಪ್ರಸ್ತಾವನೆಯನ್ನು ದಿನಾಂಕ: 12.05.2021ರ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ತಿರಸ್ಕರಿಸಿರುತ್ತದೆ.

ಮೈಸೂರು ಸಕ್ಕರೆ ಕಂಪನಿಯು ಪ್ರಸ್ತುತ ರೂ.136.01 ಕೋಟಿಗಳ ಸಾಲ ಮತ್ತು ಹೊಣೆಗಾರಿಕೆ ಹೊಂದಿರುತ್ತದೆ. ಮೈಸೂರು ಸಕ್ಕರೆ ಕಂಪನಿಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವ ಕುರಿತು ಟೆಂಡರ್ ಪ್ರಕಟಣೆಯನ್ನು ಹೊರಡಿಸುವ ಸಂಬಂಧ ಕರಡು ಟೆಂಡರ್ ಡಾಕ್ಯುಮೆಂಟ್ ಮತ್ತು ಕರಡು ಒಡಂಬಡಿಕೆ ಪತ್ರಗಳಿಗೆ ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ. ಈ ಸಂಬಂಧ ಮೈಸೂರು ಸಕ್ಕರೆ ಕಂಪನಿಯು ಟೆಂಡರ್ ಆಹ್ವಾನಿಸುವ ಪ್ರಕ್ರಿಯೆಯನ್ನು ಕೈಗೊಳ್ಳುವುದು ಬಾಕಿ ಇರುತ್ತದೆ.

........4

ಮೈಸೂರು ಸಕ್ಕರೆ ಕಾರ್ಖಾನೆಯು ಕಾರ್ಖಾನೆಯ ಸ್ಥಾಪಿತವಾಗಿರುವ 105 ಎಕರೆ ಪೈಕಿ 87 ಎಕರೆಗಳನ್ನು ಮಾತ್ರ ಗುತ್ತಿಗೆ ನೀಡಲಾಗುತ್ತಿದೆ. ಮುಂದಿನ 10 ವರ್ಷದಲ್ಲಿ ಈ ಕಾರ್ಖಾನೆಯನ್ನು ಗುತ್ತಿಗೆದಾರರು ಈ ಕಾರ್ಖಾನೆಯ ಕಬ್ಬು ನುರಿಸುವ ಕ್ಷಮತೆಯನ್ನು 5000 ರಿಂದ 7500 ಟಿ.ಸಿ.ಡಿ ಗೆ ಹೆಚ್ಚಿಸಲು, ಡಿಸ್ಟಿಲರಿ ಸಾಮರ್ಥ್ಯವನ್ನು 36 ಕೆ.ಎಲ್.ಪಿ.ಡಿ ಇಂದ 60 ಕೆ.ಎಲ್.ಪಿ.ಡಿಗೆ ವಿಸ್ತರಿಸಲು ಮತ್ತು 40 ವರ್ಷಗಳ ನಂತರ ಕಾರ್ಖಾನೆ ಮತ್ತು ಅದಕ್ಕೆ ಸಂಬಂಧಿಸಿದ ಇತರೆ ಆಸ್ತಿಯನ್ನು ಚಾಲನಾ ಸ್ಥಿತಿಯಲ್ಲಿ ಕಂಪನಿಗೆ ಹಿಂದುರುಗಿಸುವ ಷರತ್ತನ್ನು ವಿಧಿಸಲಾಗುತ್ತದೆ. ಯಶಸ್ವಿ ಬಿಡ್‌ದಾರರು ಒಪ್ಪಂದದ ಸಹಿಗೆ ಮುಂಚೆ ರೂ.40.00 ಕೋಟಿಗಳ ಹಣವನ್ನು ಕಂಪನಿಗೆ ಪಾವತಿಸಲು ಮತ್ತು Performance Guarantee ಯಾಗಿ ರೂ. 5 ಕೋಟಿಗಳನ್ನು ಮತ್ತು ಪ್ರತಿ ವರ್ಷ ಪಾವತಿಸಬೇಕಾಗಿರುವ ವಾರ್ಷಿಕ ಗುತ್ತಿಗೆ ಮೊತ್ತವನ್ನು ಕನಿಷ್ಟ ರೂ.2.00 ಕೋಟಿಗೆ ನಿಗಧಿಪಡಿಸಲಾಗಿರುತ್ತದೆ.

ಇದೇ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ 09.03.2021 ರಂದು ಜರುಗಿದ ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಕೆ.ಟಿ.ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ) ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:133 (813) ಕ್ಕೆ ಉತ್ತರಿಸುವಾಗ ಅಂದಿನ ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ಇವರು, ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪ್ರಾರಂಭಿಸುವ ಬಗ್ಗೆ ಆ ಭಾಗದ ಜನ ಪ್ರತಿನಿಧಿಗಳು, ರೈತ ಮುಖಂಡರುಗಳು, ರೈತ ಸಂಘಟನೆಗಳ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿ ಸೂಕ್ತ ತೀರ್ಮಾನವನ್ನು ಕೈಗೊಳ್ಳುವುದೆಂದು ಉತ್ತರಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಮೈಸೂರು ಸಕ್ಕರೆ ಕಾರ್ಖಾನೆಯನ್ನು LROT (Lease Rehabilitate Operate Transfer) ಆಧಾರದ ಮೇರೆಗೆ 40 ವರ್ಷಗಳ ಅವಧಿಗೆ ಖಾಸಗಿಯವರಿಗೆ ಗುತ್ತಿಗೆ ನೀಡುತ್ತಿರುವುದ ಮೂಲಕ ಅಥವಾ ಓ ಅಂಡ್ ಎಂ ಆಧಾರದ ಮೇಲೆ ಪುನಶ್ಚೇತನಗೊಳಿಸಿ ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭಿಸುವ ಸಂಬಂಧ ಸೂಕ್ತ ತೀರ್ಮಾನ ಕೈಗೊಳ್ಳಲು ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ.

---

ಸಿಐ 259 ಸಿಓಎಫ್ 2021

(ಶಂಕರ್.ಬ. ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು.